# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 511. |
| ಸದಸ್ಯರ ಹೆಸರು | : | ಶ್ರೀ ಕೆ.ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ದಾವಣಗೆರೆ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಸದರಿ ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)</td><td>ದಾವಣಗೆರೆ ಜಿಲ್ಲೆಯಲ್ಲಿ ಒಟ್ಟು 1771 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಇವುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ತಾಲ್ಲೂಕುವಾರು ಮಾಹಿತಿ ಈ ಕೆಳಗಿನಂತಿದೆ.
<table>
<tr><th rowspan="2">ತಾಲ್ಲೂಕಿನ ಹೆಸರು</th><th rowspan="2">ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ</th><th colspan="2">ಕಾರ್ಯ ನಿರ್ವಹಿಸುತ್ತಿರುವ ಅಂ.ಕಾ ಮತ್ತು ಅಂ.ಸ ಯರ ಸಂಖ್ಯೆ</th></tr>
<tr><th>ಅಂಗನವಾಡಿ ಕಾರ್ಯಕರ್ತೆ</th><th>ಅಂಗನವಾಡಿ ಸಹಾಯಕಿ</th></tr>
<tr><td>ದಾವಣಗೆರೆ</td><td>547</td><td>531</td><td>466</td></tr>
<tr><td>ಜಗಳೂರು</td><td>267</td><td>251</td><td>232</td></tr>
<tr><td>ಹರಿಹರ</td><td>259</td><td>252</td><td>227</td></tr>
<tr><td>ಹೊನ್ನಾಳಿ</td><td>295</td><td>284</td><td>264</td></tr>
<tr><td>ಚನ್ನಗಿರಿ</td><td>403</td><td>382</td><td>339</td></tr>
<tr><td>ಒಟ್ಟು</td><td>1771</td><td>1700</td><td>1528</td></tr>
</table></td></tr>
<tr><td>ಆ.</td><td>ದಾವಣಗೆರೆ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಸ್ವಂತ ಕಟ್ಟಡ ಹಾಗೂ ಸ್ವಂತ ಕಟ್ಟಡವಿಲ್ಲದ ಕೇಂದ್ರಗಳೆಷ್ಟು; ಸ್ವಂತ ಕಟ್ಟಡವಿಲ್ಲದ ಕೇಂದ್ರಗಳನ್ನು ಯಾವ ಕಾಲಮಿತಿಯೊಳಗೆ ನಿರ್ಮಿಸಲಾಗುವುದು; (ತಾಲ್ಲೂಕುವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)</td><td>ದಾವಣಗೆರೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 1771 ಅಂಗನವಾಡಿ ಕೇಂದ್ರಗಳಲ್ಲಿ ಒಟ್ಟು 1161 ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡವಿರುತ್ತದೆ. ಉಳಿದಂತೆ 610 ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿಲ್ಲದೇ ಇತರೆ ಸರ್ಕಾರಿ, ಶಾಲಾ ಕಟ್ಟಡ ಮತ್ತು ಪರ್ಯಾಯ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿವೆ. ತಾಲ್ಲೂಕುವಾರು ವಿವರವನ್ನು ಅನುಬಂಧದಲ್ಲಿ ಒದಗಿಸಿದೆ.<br><br>ನಿವೇಶನ ಹಾಗೂ ಅನುದಾನ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಆದಷ್ಟು ಶೀಘ್ರವಾಗಿ ಕಟ್ಟಡ ನಿರ್ಮಿಸಲು ಕ್ರಮವಹಿಸಲಾಗುತ್ತಿದೆ.</td></tr>
<tr><td>ಇ.</td><td>ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಯಾವ ಯೋಜನೆಯಡಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ನಿರ್ಮಿಸಲಾಗಿದೆ; ಹೊಸದಾಗಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ಯಾವಾಗ ನಿರ್ಮಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)</td><td>ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಕೇಂದ್ರ ಪುರಸ್ಕೃತ ನರೇಗಾ ಒಗ್ಗೂಡಿಸುವಿಕೆ ಯೋಜನೆಯಡಿ 10 ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ರೂ.100.00 ಲಕ್ಷಗಳನ್ನು ಮತ್ತು ಐಸಿಡಿಎಸ್-ನರೇಗಾ ಯೋಜನೆಯಡಿ 8 ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ರೂ.96.00 ಲಕ್ಷ ಅನುದಾನವನ್ನು ಒದಗಿಸಲಾಗಿದೆ.</td></tr>
</table>

| | | |
|---|---|---|
| | | 2024-25 ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲೆಗೆ ವಿವಿಧ ಯೋಜನೆಗಳಡಿ 11 ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಗಾಗಿ ಕ್ರಮವಹಿಸಲಾಗಿದ್ದು, ಅನುದಾನ ಬಿಡುಗಡೆಯಾದ ತಕ್ಷಣ ಹೊಸ ಕಟ್ಟಡ ನಿರ್ಮಾಣಕ್ಕಾಗಿ ಸೂಕ್ತ ಕ್ರಮ ವಹಿಸಲಾಗುವುದು. |

**ಸಂಖ್ಯೆ:ಮಮಇ 145 ಐಸಿಡಿ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.